# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು – 572103

ಸಂಖ್ಯೆ:ತುವಿ:ಸಾ&ಖ.ಕೋ:2023-24/ 45816 ದಿನಾಂಕ:29.02.2024

## :ಸುತ್ತೋಲೆ:

ವಿಷಯ:– ಬಸವ ಜಯಂತಿ ಪ್ರಯುಕ್ತ ರಾಜ್ಯಮಟ್ಟದ ಪ್ರಬಂಧ ಹಾಗೂ ಕವನ ಸ್ಪರ್ಧೆಯನ್ನು ಏರ್ಪಡಿಸಿರುವ ಕುರಿತು.

ಉಲ್ಲೇಖ:– 1. ಈ–ಮೇಲ್ ಪತ್ರ ಸ್ವೀಕೃತಗೊಂಡ ದಿನಾಂಕ:16.02.2024

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:29.02.2024 (ಕಂಡಿಕೆ–91)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಸವ ಸಮಿತಿಯಿಂದ ದಿನಾಂಕ:10.05.2024ರಂದು ಬಸವಜಯಂತಿ ಪ್ರಯುಕ್ತ ರಾಜ್ಯಮಟ್ಟದ ಪ್ರಬಂಧ ಹಾಗೂ ಕವನ ಸ್ಪರ್ಧೆ ಏರ್ಪಡಿಸಲಾಗಿದ್ದು, ಸದರಿ ಸ್ಪರ್ಧೆಗೆ ವಿಶ್ವವಿದ್ಯಾನಿಲಯದ ಬೋಧಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸುವಂತೆ ಬಸವ ಸಮಿತಿಯ ಅಧ್ಯಕ್ಷರು ಕೋರಿರುತ್ತಾರೆ. (ಪ್ರತಿ ಲಗತ್ತಿಸಿದೆ)

ಈ ಹಿನ್ನೆಲೆಯಲ್ಲಿ ಸದರಿ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕರು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

[signature] 29.02.24

ಉಪಕುಲಸಚಿವರು,
ಖರೀದಿ ಕೋಶ
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು

ಪ್ರತಿಗಳು:–

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಂಯೋಜಕರು, ಶ್ರೀ ಬಸವೇಶ್ವರ ಅಧ್ಯಯನ ಪೀಠ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.

ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

[initials] 2/1/24


॥ ಶ್ರೀ ಗುರು ಬಸವಲಿಂಗಾಯ ನಮಃ ॥

# ಬಸವ ಸಮಿತಿ

ಬಸವ ಜಯಂತಿ 2024 ಅಂಗವಾಗಿ

# ರಾಜ್ಯಮಟ್ಟದ ಪ್ರಬಂಧ ಹಾಗೂ ಕವನ ಸ್ಪರ್ಧೆ

ಬಸವ ಪಥದ ಎಲ್ಲ ಓದುಗರಿಗೂ, ಲೇಖಕರಿಗೂ, ಕವಿಗಳಿಗೂ ಮತ್ತು ಬಸವಾನುಯಾಯಿಗಳಿಗೂ ಮುಂಬರುವ ಬಸವ ಜಯಂತಿ 2024ರ ಹೃದಯಪೂರ್ವಕ ಶುಭಾಶಯಗಳು. ಈ ವರ್ಷದ ಬಸವ ಜಯಂತಿಯನ್ನು ಸ್ಥಾವರ ಸ್ವರೂಪದಲ್ಲಿ ಆಚರಿಸದೆ, ಜಂಗಮ ಸ್ವರೂಪಗೊಳಿಸುವುದಕ್ಕಾಗಿ ರಾಜ್ಯಮಟ್ಟದ ಪ್ರಬಂಧ ಹಾಗೂ ಕವನ ಸ್ಪರ್ಧೆಯನ್ನು ಹಮ್ಮಿಕೊಳ್ಳಲು ಕೇಂದ್ರ ಬಸವ ಸಮಿತಿ ನಿರ್ಣಯಿಸಿದೆ. ಸರ್ವರು ಈ ಪ್ರಬಂಧ ಹಾಗೂ ಕವನ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸ್ಪರ್ಧೆಯನ್ನು ಯಶಸ್ವಿಗೊಳಿಸಲು ವಿನಂತಿಸಿಕೊಳ್ಳುತ್ತೇವೆ.



## ಪ್ರಬಂಧಕ್ಕೆ ಆಯ್ದುಕೊಳ್ಳಬಹುದಾದ ವಿಷಯಗಳು

* ಅರಿವು-ಆಚಾರ-ಅನುಭಾವ
* ಭಾರತೀಯ ದಾರ್ಶನಿಕ ಪರಂಪರೆ ಮತ್ತು ಬಸವ ದರ್ಶನ
* ವಚನ ಚಳುವಳಿ – ಸಾಂಸ್ಕೃತಿಕ ಮುಖಾಮುಖಿ
* ರಾಜಪ್ರಭುತ್ವ, ಪ್ರಜಾಪ್ರಭುತ್ವ ಮತ್ತು ಶರಣರ ಪ್ರಜ್ಞಾಪ್ರಭುತ್ವ
* ಭಾರತೀಯ ಭಕ್ತಿ ಪರಂಪರೆಯಲ್ಲಿ ಭಕ್ತಿಭಂಡಾರಿ ಬಸವಣ್ಣ

## ಕವನದ ವಿಷಯ

* ಬಸವಾದಿ ಶರಣರ ತತ್ವಗಳಿಗೆ ಸೀಮಿತವಾಗಿರತಕ್ಕದ್ದು (ಆಧುನಿಕ ವಚನಗಳಿಗೆ ಅವಕಾಶವಿಲ್ಲ)

ಆಯ್ಕೆಯಾದ ಪ್ರಬುದ್ಧ ಪ್ರಬಂಧ ವಿಜೇತರಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವಾಗಿ ನಗದು ರೂಪದಲ್ಲಿ ತಲಾ ರೂ.25,000/–, ರೂ.10,000/– ಮತ್ತು ರೂ.5,000/–ಗಳನ್ನು ಹಾಗೂ ಆಯ್ಕೆಯಾದ ಕವನಗಳ ವಿಜೇತರಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವಾಗಿ ನಗದು ರೂಪದಲ್ಲಿ ತಲಾ ರೂ.10,000/–, ರೂ.5,000/– ಮತ್ತು ರೂ.3,000/–ಗಳು.

ಸ್ಪರ್ಧೆಯಲ್ಲಿ ಪಾಲ್ಗೊಂಡ ಪ್ರತಿಯೊಬ್ಬರಿಗೂ ಪ್ರಶಸ್ತಿ ಪತ್ರಗಳನ್ನು ಬಸವ ಜಯಂತಿಯ ವಿಶೇಷ ಸಮಾರಂಭದಲ್ಲಿ ನೀಡಿ ಗೌರವಿಸಲಾಗುವುದು.

## ಪ್ರಬಂಧ ಮತ್ತು ಕವನ ಸ್ಪರ್ಧೆಯ ನಿಯಮಗಳು

1. ತಮ್ಮ ಪ್ರಬಂಧಗಳು ಮತ್ತು ಕವನಗಳು ಸ್ವ-ರಚಿತವಾಗಿರಬೇಕು.
2. ತಮ್ಮ ಪ್ರಬಂಧಗಳು ಹಾಗೂ ಕವನಗಳು ಯಾವುದೇ ಪತ್ರಿಕೆಗಳಲ್ಲಿ ಮತ್ತು ಪುಸ್ತಕಗಳಲ್ಲಿ ಪ್ರಕಟಗೊಂಡಿರಬಾರದು.
3. ಪ್ರಬಂಧಗಳು 2000 ಪದಗಳ ಮಿತಿಯಲ್ಲಿರಬೇಕು.
4. ಪ್ರಬಂಧಗಳು ಮತ್ತು ಕವನಗಳು ನುಡಿ ತಂತ್ರಾಂಶದಲ್ಲಿ (ನುಡಿ 01 ಇ, ಗಾತ್ರ 13, ಸಾಲಿನ ಅಂತರ 1.5) ತಪ್ಪಿಲ್ಲದೆ ಟೈಪಿಸಿ, ತಿದ್ದುಪಡಿ ಮಾಡಿ ವರ್ಡ್ ಫೈಲ್ (MS-WORD) ಮತ್ತು ಪಿಡಿಎಫ್ (PDF) ರೂಪದಲ್ಲಿ ತಮ್ಮ ಸಂಪೂರ್ಣ ವಿಳಾಸದೊಂದಿಗೆ ಕಳುಹಿಸುವುದು.
5. ಪ್ರಬಂಧಗಳು ಮತ್ತು ಕವನಗಳನ್ನು competition@basavasamithi.org ಇ–ಮೇಲ್‌ಗೆ ಕಳುಹಿಸುವುದು.
6. ಆಯ್ಕೆಗೊಂಡ ಹಾಗೂ ಸೂಕ್ತ ಪ್ರಬಂಧಗಳನ್ನು ಹಾಗೂ ಕವನಗಳನ್ನು ಮುಂಬರುವ ಬಸವಪಥಗಳಲ್ಲಿ ಪ್ರಕಟಿಸಲಾಗುವುದು.
7. ಕವನಗಳಿಗೆ ಯಾವುದೇ ಪದಗಳ ಮಿತಿಯಿರುವುದಿಲ್ಲ.
8. ಕವನವು ಒಂದು ಪುಟಕ್ಕೆ ಮೀರದಂತಿರಬೇಕು.
9. ಪ್ರಬಂಧ ಮತ್ತು ಕವನಗಳ ಮೌಲ್ಯಮಾಪನ ಬಸವ ಸಮಿತಿಯಿಂದ ರಚಿಸಿರುವ ಆಯ್ಕೆ ಸಮಿತಿಯದ್ದಾಗಿರುತ್ತದೆ.
10. ಆಯ್ಕೆ ಸಮಿತಿಯ ನಿರ್ಧಾರವೇ ಅಂತಿಮವಾಗಿರುತ್ತದೆ.
11. ತಮ್ಮ ಪ್ರಬಂಧ ಮತ್ತು ಕವನಗಳನ್ನು ದಿನಾಂಕ: 31.03.2024ರ ಒಳಗಾಗಿ ತಲುಪುವಂತೆ ಬಸವ ಸಮಿತಿಯ ವಿಳಾಸಕ್ಕೆ (ಇ–ಮೇಲ್ competition@basavasamithi.org) ಕಳುಹಿಸಬೇಕು.
12. ನಿಗದಿತ ದಿನಾಂಕದ ನಂತರ ಬಂದ ಪ್ರಬಂಧ ಮತ್ತು ಕವನಗಳನ್ನು ಯಾವುದೇ ಕಾರಣಕ್ಕೂ ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಡಾ. ಅರವಿಂದ ಜತ್ತಿ
ಅಧ್ಯಕ್ಷರು

ಬಸವ ಸಮಿತಿ

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
ಶ್ರೀ ಮೋಹನ್ ಬಸವನಗೌಡ ಪಾಟೀಲ 94489 20888
ಶ್ರೀ ಶಂಕರ ಎಂ. ಜಾಲವಾದಿ 94814 22734
ಶ್ರೀಮತಿ ಯಶೋದಾ ಬಾಸರ್ 80505 23257